सत्यमेव जयते

**" ELECTION URGENT "**

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಂಡಳಿ ಕಟ್ಟಡ (ಹಿಂಭಾಗ), 1ನೇ ಮಹಡಿ,
ನಂ.8, ಕನ್ನಿಂಗ್ ಹ್ಯಾಂ ರಸ್ತೆ. ಬೆಂಗಳೂರು-52.

ರಾಜ್ಯ ಚುನಾವಣಾ ಆಯೋಗವು ಕರ್ನಾಟಕ ಪೌರಸಭೆಗಳ (ಕೌನ್ಸಿಲರುಗಳ ಚುನಾವಣೆ) ನಿಯಮಗಳು, 1977ರ ನಿಯಮ 3(1) ರಲ್ಲಿ ರಾಜ್ಯ ಚುನಾವಣಾ ಆಯೋಗಕ್ಕೆ ದತ್ತವಾಗಿರುವ ಅಧಿಕಾರದ ಮೇರೆಗೆ ಆದೇಶ ಸಂಖ್ಯೆ: ರಾಚುಆ:30:ಇಯುಬಿ:2018, ದಿನಾಂಕ: 02.08.2018 ರಂದು ರಾಜ್ಯದ 105 ನಗರ ಸ್ಥಳೀಯ ಸಂಸ್ಥೆಗಳಿಗೆ ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಿಸಿ ಚುನಾವಣೆ ನಡೆಸಲು ಆದೇಶಿಸಲಾಗಿತ್ತು ಹಾಗೂ ದಿನಾಂಕ: 09.08.2018ರಲ್ಲಿ ಮತ್ತು ದಿನಾಂಕ:16.08.2018 ರಲ್ಲಿ ತಿದ್ದುಪಡಿ ಮಾಡಿ ಚುನಾವಣಾ ವೇಳಾಪಟ್ಟಿಯನ್ನು ಪರಿಷ್ಕರಿಸಲಾಗಿರುತ್ತದೆ.

ಜಿಲ್ಲಾಧಿಕಾರಿಗಳು ಕೊಡಗು ಜಿಲ್ಲೆ ರವರು ಪತ್ರ ಸಂಖ್ಯೆ: ಚುನಾ/11/2018-19, ದಿನಾಂಕ: 16.08.2018ರ (ಆಯೋಗದಲ್ಲಿ ಇ-ಮೇಲ್ ಮೂಲಕ ಸ್ವೀಕೃತವಾದ ದಿನಾಂಕ: 18.08.2018) ಹಾಗೂ 18.08.2018ರ ಪತ್ರಗಳಲ್ಲಿ ಕೊಡಗು ಜಿಲ್ಲೆಯಾದ್ಯಂತ ಕಳೆದ 15 ದಿನಗಳಿಂದ ಎಡಬಿಡದೆ ಧಾರಾಕಾರವಾಗಿ ಮಳೆ ಬೀಳುತ್ತಿದ್ದು ಇದರಿಂದಾಗಿ ಜಿಲ್ಲೆಯ ಎಲ್ಲಾ ರಾಷ್ಟ್ರೀಯ ಹೆದ್ದಾರಿ, ಜಿಲ್ಲಾ ಹೆದ್ದಾರಿ, ಎಲ್ಲಾ ನಗರ ಪ್ರದೇಶದ ಹಾಗೂ ಗ್ರಾಮೀಣ ಪ್ರದೇಶದ ರಸ್ತೆಗಳಿಗೆ ಬೆಟ್ಟ-ಗುಡ್ಡ ಜರಿದು ರಸ್ತೆ ಮೇಲೆ ಬಿದ್ದಿರುವುದರಿಂದ ರಸ್ತೆ ಸಂಪರ್ಕಗಳು ಕಡಿತವಾಗಿರುತ್ತದೆ. ದೂರವಾಣಿ ಸಂಪರ್ಕಗಳು, ವಿದ್ಯುತ್ ಸಂಪರ್ಕ ಮತ್ತು ಇಂಟರ್ ನೆಟ್ ಸಂಪರ್ಕ ಕಡಿತಗೊಂಡಿದ್ದು, ಜಿಲ್ಲೆಯ ಎಲ್ಲಾ ನದಿ, ಕಾಲುವೆಗಳು ಹುಕ್ಕಿಹರಿಯುತ್ತಿರುವುದರಿಂದ ಕುಶಾಲನಗರ, ವೀರಾಜಪೇಟೆ ಮತ್ತು ಸೋಮವಾರಪೇಟೆ ನಗರದ ಕೆಲವು ವಾರ್ಡುಗಳೂ ಸೇರಿದಂತೆ ಅಪಾರ ಹಾನಿಯಾಗಿದ್ದು ಜನರುಗಳನ್ನು ಗಂಜಿ ಕೇಂದ್ರಗಳಿಗೆ ಸ್ಥಳಾಂತರಿಸಲಾಗಿರುತ್ತದೆ. ಮುಂದಿನ ದಿನಗಳಲ್ಲೀಯೂ ಮಳೆ ಮುಂದುವರಿಯುವ ಸಾಧ್ಯತೆ ಇರುವುದರಿಂದ ವಿದ್ಯುತ್ ಮತಯಂತ್ರಗಳ ಸಾಗಣೆಗೆ, ಮತಪತ್ರಗಳ ಮುದ್ರಣ, ಮತಯಂತ್ರಗಳ ಸಿದ್ಧತೆ ಇತರೆ ಚುನಾವಣೆ ಪ್ರಕ್ರಿಯೆಗಳಿಗೆ ತೊಂದರೆಯುಂಟಾಗಿರುವುದರಿಂದ ಚುನಾವಣಾ ಪ್ರಕ್ರಿಯೆಯನ್ನು ಮುಂದೂಡುವಂತೆ ಕೋರಿರುತ್ತಾರೆ.

ಆಯೋಗದ ದಿನಾಂಕ: 02.08.2018ರ ಆದೇಶದಂತೆ, ಚುನಾವಣಾ ಪ್ರಕ್ರಿಯೆ ದಿನಾಂಕ: 10.08.2018 ರಿಂದ ಪ್ರಾರಂಭವಾಗಿದ್ದು ದಿನಾಂಕ: 16.08.2018 ರವರೆಗೆ ನಡೆದಿರುತ್ತದೆ. ಮೇಲ್ಕಂಡ ಎಲ್ಲಾ ಅಂಶಗಳನ್ನು ಪರಿಶೀಲಿಸಿ ಕೊಡಗು ಜಿಲ್ಲೆಯ ಕುಶಾಲನಗರ, ವೀರಾಜಪೇಟೆ ಮತ್ತು ಸೋಮವಾರಪೇಟೆ ಪಟ್ಟಣ ಪಂಚಾಯಿತಿಗಳ ಸಾರ್ವತ್ರಿಕ ಚುನಾವಣೆಯನ್ನು ಪ್ರಕೃತಿ ವಿಕೋಪದಿಂದಾಗಿ ಮುಂದುವರೆಸಲು

ಸಾಧ್ಯವಾಗದ ಕಾರಣ ಚುನಾವಣಾ ಪ್ರಕ್ರಿಯೆಯನ್ನು ತತ್‌ಕ್ಷಣದಿಂದ ತಡೆಹಿಡಿಯುವುದು ಅವಶ್ಯವಾಗಿರುತ್ತದೆ. ಆದುದರಿಂದ ಈ ಆದೇಶ:

**ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ: ರಾಚುಆ.30.ಇಯುಬಿ.2018,**

**ಬೆಂಗಳೂರು, ದಿನಾಂಕ: 18–08–2018**

ರಾಜ್ಯ ಚುನಾವಣಾ ಆಯೋಗವು ಭಾರತ ಸಂವಿಧಾನದ ಅನುಚ್ಛೇದ 243ಜಡ್‌ಎ ರಲ್ಲಿ ಪೌರಸಭೆಗಳಿಗೆ ನಡೆಯುವ ಎಲ್ಲಾ ಚುನಾವಣೆಗಳಿಗೆ ಸಂಬಂಧಪಟ್ಟಂತೆ ಮತದಾರರ ಪಟ್ಟಿಗಳ ತಯಾರಿಕೆ ಮತ್ತು ಎಲ್ಲಾ ಚುನಾವಣೆಗಳ ನಿರ್ವಹಣೆ ಅಧೀಕ್ಷಣೆ, ನಿರ್ದೇಶನ ಮತ್ತು ನಿಯಂತ್ರಣ ಇವುಗಳು ರಾಜ್ಯ ಚುನಾವಣಾ ಆಯೋಗಕ್ಕೆ ದತ್ತವಾಗಿರುವ ಅಧಿಕಾರದ ಮೇರೆಗೆ, ಕರ್ನಾಟಕ ಪೌರಸಭೆಗಳ (ಕೌನ್ಸಿಲರುಗಳ ಚುನಾವಣೆ) ನಿಯಮಗಳು 1977ರ ನಿಯಮ 3(1) ರಲ್ಲಿ ರಾಜ್ಯ ಚುನಾವಣಾ ಆಯೋಗಕ್ಕೆ ದತ್ತವಾಗಿರುವ ಅಧಿಕಾರದ ಮೇರೆಗೆ ಕೊಡಗು ಜಿಲ್ಲೆಯ ಕುಶಾಲನಗರ, ಸೋಮವಾರಪೇಟೆ ಮತ್ತು ವಿರಾಜಪೇಟೆ ಪಟ್ಟಣ ಪಂಚಾಯಿತಿಗಳ ಚುನಾವಣಾ ಪ್ರಕ್ರಿಯೆಯನ್ನು ತತ್‌ಕ್ಷಣದಿಂದ ಮುಂದಿನ ಆದೇಶದವರೆಗೆ ತಡೆಹಿಡಿಯಲಾಗಿದೆ. ದಿನಾಂಕ: 02.08.2018 ರಿಂದ ದಿನಾಂಕ: 16.08.2018ರ ವರೆಗಿನ ಚುನಾವಣಾ ಪ್ರಕ್ರಿಯೆಗಳಿಗೆ ಯಾವುದೇ ಬಾದಕವಿರುವುದಿಲ್ಲ.

ಆದೇಶಾನುಸಾರ

(ಅರ್ಚನ ಎಂ.ಎಸ್) 18/8/2018
ಅಧೀನ ಕಾರ್ಯದರ್ಶಿ,
ರಾಜ್ಯ ಚುನಾವಣಾ ಆಯೋಗ, ಕರ್ನಾಟಕ.

**ಇವರಿಗೆ:**

1. ಜಿಲ್ಲಾಧಿಕಾರಿಗಳು, ಕೊಡಗು ಜಿಲ್ಲೆ, ಕೊಡಗು.
2. ಸಂಬಂಧಪಟ್ಟ ಚುನಾವಣಾಧಿಕಾರಿಯವರಿಗೆ (ಜಿಲ್ಲಾಧಿಕಾರಿಗಳ ಮೂಲಕ).